# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ :0816-2255650, 2273511 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಪ.ವಿ:ವಿ.ನಿ.-02:2026-27:380

ದಿನಾಂಕ:09.07.2026

## : ಸುತ್ತೋಲೆ :

**ವಿಷಯ: ದಿನಾಂಕ:13.07.2026 ರಂದು ತುಮಕೂರು ವಿಶ್ವವಿದ್ಯಾನಿಲಯದ ಬಿದರಕಟ್ಟೆಯ ಜ್ಞಾನಸಿರಿ ಕ್ಯಾಂಪಸ್‌ನಲ್ಲಿ ನಡೆಯುವ ಸ್ನಾತಕೋತ್ತರ ಪರೀಕ್ಷಾ ಸಮಯ ಬದಲಾವಣೆ ಕುರಿತು.**

ಉಲ್ಲೇಖ: ಈ ಕಚೇರಿ ಅಧಿಸೂಚನೆ ಸಂಖ್ಯೆ:ತು.ವಿ.:ಪ.ವಿ.:ವಿ.ನಿ.-02:2026-27 /336 ದಿನಾಂಕ: 22.06.2026

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯಲ್ಲಿ ವಿವಿಧ ಸ್ನಾತಕೋತ್ತರ ಪದವಿಗಳ ಪರೀಕ್ಷಾ ಕೇಂದ್ರ ಹಾಗೂ ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ದಿನಾಂಕ: 13.07.2026 ರ ಪೂರ್ವಾಹ್ನ ವಿಶ್ವವಿದ್ಯಾನಿಲಯ ಜ್ಞಾನಸಿರಿ ಕ್ಯಾಂಪಸ್‌ನಲ್ಲಿ ವಿವಿಧ ಕಟ್ಟಡಗಳ ಲೋಕಾರ್ಪಣೆ ಹಾಗೂ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ಪ್ರಯುಕ್ತ ಕರ್ನಾಟಕ ಸರ್ಕಾರದ ಘನತೆವೆತ್ತ ರಾಜ್ಯಪಾಲರು, ಕರ್ನಾಟಕ ಸರ್ಕಾರದ ಸನ್ಮಾನ್ಯ ಉಪ ಮುಖ್ಯಮಂತ್ರಿಗಳು, ಮಾನ್ಯ ರೈಲ್ವೆ ಮತ್ತು ಜಲಶಕ್ತಿ ಖಾತೆ ಸಚಿವರು, ಭಾರತ ಸರ್ಕಾರ ಹಾಗೂ ಇತರೆ ಗಣ್ಯರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ **ದಿನಾಂಕ:13.07.2026 ರ ಸೋಮವಾರ, ತುಮಕೂರು ವಿಶ್ವವಿದ್ಯಾನಿಲಯದ ಬಿದರಕಟ್ಟೆಯ ಜ್ಞಾನಸಿರಿ ಕ್ಯಾಂಪಸ್‌ನಲ್ಲಿ ಬೆಳಿಗ್ಗೆ 11.00 ರಿಂದ 02.00 ಗಂಟೆಗೆ ನಿಗದಿಯಾಗಿದ್ದ ಪರೀಕ್ಷಾ ಸಮಯವನ್ನು ಸದರಿ ದಿನದಂದೆ ಮಧ್ಯಾಹ್ನ 02.00 ರಿಂದ 05.00 ಗಂಟೆಗೆ ಮರುನಿಗದಿಪಡಿಸಲಾಗಿದೆ.**

**ಮೇಲ್ಕಂಡ ಎಲ್ಲಾ ಪರೀಕ್ಷೆಗಳನ್ನು ಈಗಾಗಲೇ ನಿಗದಿಪಡಿಸಿರುವ ಆಯಾ ಪರೀಕ್ಷಾ ಕೇಂದ್ರಗಳಲ್ಲೇ ನಡೆಸಲಾಗುವುದು.**

**ಬದಲಾದ ಸಮಯವನ್ನು ಸಂಬಂಧಿಸಿದ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರುವುದು, ನಾಮಫಲಕದಲ್ಲಿ ಪ್ರಕಟಿಸುವುದು ಮತ್ತು ಪರೀಕ್ಷೆಗಳನ್ನು ನಡೆಸಲು ಅಗತ್ಯ ಕ್ರಮಕೈಗೊಳ್ಳುವುದು ಉಳಿದಂತೆ ಯಾವುದೇ ಬದಲಾವಣೆಗಳಿರುವುದಿಲ್ಲ.**

**"ಈ ಸುತ್ತೋಲೆಯು ತುಮಕೂರು ವಿಶ್ವವಿದ್ಯಾನಿಲಯದ ಬಿದರಕಟ್ಟೆಯ ಜ್ಞಾನಸಿರಿ ಕ್ಯಾಂಪಸ್‌ನಲ್ಲಿನ ವಿಜ್ಞಾನ ವಿಷಯಗಳ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ".**

**ಆದೇಶದ ಮೇರೆಗೆ,**

09/07

**ಕುಲಸಚಿವರು (ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

1. **ಸಂಯೋಜಕರು,ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
2. **ಅಧ್ಯಕ್ಷರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
3. **2025-26ನೇ ಸಾಲಿನ ಸ್ನಾತಕೋತ್ತರ ಪರೀಕ್ಷಾ ಮಂಡಳಿಯ ಅಧ್ಯಕ್ಷರುಗಳು, ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಉಪಕುಲಸಚಿವರು ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಇಂದೇ ಅಂತರ್ಜಾಲದಲ್ಲಿ ಪ್ರಕಟಿಸುವುದು.
6. ಕಛೇರಿ ಪ್ರತಿ.